ಉತ್ತರ ಜೀವಿತ ಪತ್ರ ನೀಡುವ ಅಧಿಕಾರ.

4212(4544) ಶ್ರೀ ಪೂಜಾರ್ ಪಿ.ಹೆಚ್. (ಬಾಗಲಕೋಟೆ) :— ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಉತ್ತರ ಜೀವಿತ ಪತ್ರ ನೀಡುವ ಅಧಿಕಾರವನ್ನು ತಹಸೀಲ್ದಾರ್‌ರವರಿಂದ ಕಿತ್ತುಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈಗ ಈ ಬಗ್ಗೆ ಕೋರ್ಟಿನಿಂದಲೇ ಆದೇಶ ಪಡೆಯುವ ವ್ಯವಸ್ಥೆಯಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಇ) ಹಾಗಿದ್ದಲ್ಲಿ, ಪುನರ್ ಪರಿಶೀಲಿಸಿ ಇದನ್ನು ಸರಳಗೊಳಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :—

ಅ) ಹೌದು

ಆ) ಕೆಲವು ಪ್ರಕರಣಗಳಲ್ಲಿ ಮಾತ್ರ ತೊಂದರೆಯಾಗುತ್ತಿದೆ.

ಇ) ಸದ್ಯಕ್ಕೆ ಇಲ್ಲ.

ರಾಜೀವಗಾಂಧಿ ಗ್ರಾಮೀಣ ವಸತಿ ನಿಗಮದಿಂದ ನಿರ್ಮಿಸಿರುವ ಮನೆಗಳು.

4214(4569) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) :— ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸಾಮಾಜಿಕ ವಸತಿಗಾಗಿ ಅಗತ್ಯ ಸಂಪನ್ಮೂಲವನ್ನು ಸಂಗ್ರಹಿಸುವ ಸಲುವಾಗಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮವನ್ನು ಸ್ಥಾಪಿಸಿರುವುದು ನಿಜವಲ್ಲವೆ ಹಾಗೂ ಈ ನಿಗಮಕ್ಕೆ ಸರ್ಕಾರವು ಈ ಹಣಕಾಸು ವರ್ಷದಲ್ಲಿ ಒದಗಿಸಿರುವ ಹಣದ ಮೊತ್ತವೆಷ್ಟು ;

ಆ) ಈ ನಿಗಮದ ವತಿಯಿಂದ ಆಶ್ರಯ ಅಂಬೇಡ್ಕರ್ ಯೋಜನೆಗಳಡಿಯಲ್ಲಿ ಈ ವರ್ಷದಲ್ಲಿ ರಾಜ್ಯದಲ್ಲಿ ಎರಡು ಲಕ್ಷ ಮನೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿರುವುದು ನಿಜವಲ್ಲವೇ ;

ಇ) ಹಾಗಿದ್ದಲ್ಲಿ, ಈ ನಿಗಮದ ವತಿಯಿಂದ ಬೀದರ್ ಜಿಲ್ಲೆಯ ಭಾಲ್ಕಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಈ ವರ್ಷ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಲಾಗಿದೆ ಇದಕ್ಕಾಗಿ ಈ ಮತ ಕ್ಷೇತ್ರದಲ್ಲಿ ಯಾವ ಯಾವ

ಗ್ರಾಮಗಳಲ್ಲಿ ಎಷ್ಟೆಷ್ಟು ಎಕರೆ ಜಾಗವನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. ಎಷ್ಟು ಮೊತ್ತದ ಹಣವನ್ನು ಇದಕ್ಕಾಗಿ ಇಲ್ಲಿಯವರೆಗೆ ಖರ್ಚು ಮಾಡಲಾಗಿದೆ;

ಈ) ಭಾಲ್ಕಿ ವಿಧಾನಸಭಾ ಕ್ಷೇತ್ರದಲ್ಲಿ ಇಲ್ಲಿಯವರೆಗೆ ಮೇಲ್ಕಂಡ ನಿಗಮದ ವತಿಯಿಂದ ಮನೆಗಳನ್ನು ನಿರ್ಮಿಸಲಾಗಿದೆಯೆ ಒಂದು ವೇಳೆ ನಿರ್ಮಿಸಿದ್ದಲ್ಲಿ ಇದಕ್ಕೆ ಕಾರಣಗಳೇನು ಯಾವಾಗ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲಾಗುವುದು?

ಶ್ರೀ ಖಿಮರುಲ್ ಇಸ್ಲಾಂ (ವಸತಿ ಸಚಿವರು) :—

ಅ) ಹೌದು, ಈ ನಿಗಮಕ್ಕೆ ಪ್ರಸ್ತುತ ವರ್ಷದಲ್ಲಿ ಸಿಬ್ಬಂದಿ ವೆಚ್ಚಕ್ಕಾಗಿ ರೂ. 20 ಲಕ್ಷ ಮೊತ್ತವನ್ನು ಹಾಗೂ ಶೇರು ಬಂಡವಾಳವಾಗಿ ರೂ. 2 ಕೋಟಿಗಳನ್ನು ಒದಗಿಸಲಾಗಿದೆ. ಹಾಗೂ ವಸತಿ ಯೋಜನೆಗಳ ಅನುಷ್ಠಾನಕ್ಕಾಗಿ ಸರ್ಕಾರವು ಇಲ್ಲಿಯವರೆಗೆ ಈ ಕೆಳಕಂಡ ಮೊತ್ತವನ್ನು ಬಿಡುಗಡೆ ಮಾಡಿದೆ.

(ಲಕ್ಷ ರೂ.ಗಳಲ್ಲಿ)

ಕ್ರ.ಸಂ.	ಯೋಜನೆಗಳು	ಮೊತ್ತ
1	ಅಂಬೇಡ್ಕರ್	1263.00
2.	ಆಶ್ರಯ (ಗ್ರಾಮೀಣ ಸಹಾಯ ಧನ)	5581.00

ಆ) ಹೌದು

ಇ) ಭಾಲ್ಕಿ ವಿಧಾನಸಭಾ ಕ್ಷೇತ್ರಕ್ಕೆ ಆಶ್ರಯ ಯೋಜನೆಯಡಿ ಗ್ರಾಮೀಣ ಪ್ರದೇಶಗಳಿಗೆ 705 ಹಾಗೂ ಪಟ್ಟಣ ಪ್ರದೇಶಗಳಿಗೆ 67 ಮತ್ತು ಅಂಬೇಡ್ಕರ್ ಯೋಜನೆಯಡಿ 80 ಮನೆಗಳ ಗುರಿಯನ್ನು ನೀಡಲಾಗಿದೆ. ಸರ್ಕಾರದ ಆದೇಶದಮಸಾರ ಈ ಯೋಜನೆಗಳಿಗೆ ಸರ್ಕಾರಿ ಜಮೀನು ಲಭ್ಯವಿಲ್ಲದ ಕಡೆ ಖಾಸಗಿ ಜಮೀನನ್ನು ನೇರವಾಗಿ ಖರೀದಿಸುವ ಅಧಿಕಾರವನ್ನು ಜಿಲ್ಲಾಧಿಕಾರಿಗಳಿಗೆ ನೀಡಲಾಗಿದೆ. ಈ ಯೋಜನೆಯಡಿ ಧನೂರು ಹಾಗೂ ಭಾಲ್ಕಿ ಗ್ರಾಮಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ 7.14 ಎಕರೆ ಜಮೀನನ್ನು ಖರೀದಿಸಲಾಗಿದೆ. ಇದಕ್ಕಾಗಿ ಖರ್ಚು ಮಾಡಿರುವ ಹಣ 8.18 ಲಕ್ಷ.

ಈ) ಈಗಾಗಲೇ ಆಶ್ರಯ ಸಮಿತಿಗಳನ್ನು ರಚಿಸಲಾಗಿದ್ದು. ಈ ಸಮಿತಿಗಳ ಫಲಾನುಭವಿಗಳ ಆಯ್ಕೆಯ ಪ್ರಕ್ರಿಯೆಯನ್ನು ಪ್ರಾರಂಭ ಮಾಡಿದ್ದು, ಈ ಪ್ರಕ್ರಿಯೆ ಪೂರ್ಣಗೊಂಡ ನಂತರ ಮನೆಗಳ ನಿರ್ಮಾಣ ಮಾಡಲಾಗುವುದು.